## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಚಾಮರಾಜನಗರ–ರಾಮಸಮುದ್ರ ಸ್ಥಳೀಯ ಯೋಜನಾ ಪ್ರದೇಶದ ಮಹಾ ಯೋಜನೆ (ಪರಿಷ್ಕೃತ–I) ಗೆ ಸರ್ಕಾರವು ಅಂತಿಮ ಅನುಮೋದನೆ ನೀಡುವ ಕುರಿತು.

ಓದಲಾಗಿದೆ: ೧) ಸರ್ಕಾರದ ಆದೇಶ ಸಂಖ್ಯೆ. ನಅಇ 367 ಮೈಅಪ್ರಾ 2005, ದಿನಾಂಕ: 22.11.05.

೨) ಆಯುಕ್ತರು, ನಗರಾಭಿವೃದ್ಧಿ ಪ್ರಾಧಿಕಾರ, ಚಾಮರಾಜನಗರ–ರಾಮಸಮುದ್ರ ಇವರ ಪತ್ರ ಸಂಖ್ಯೆ. ಚಾರಾನಪ್ರಾ:ತಾಂತ್ರಿಕ: ಮಾ.ಪ್ಲಾ.ಅಂ:6:2006-07, ದಿನಾಂಕ: 3.4.07.

೩) ನಿರ್ದೇಶಕರು, ನಗರ ಯೋಜನಾ ಇಲಾಖೆ ಇವರ ಏಕ ಕಡತ ಸಂಖ್ಯೆ. ನಯೋ(25):ಚಾ.ನಗರ:ಮಾ.ಪ್ಲಾ.ಪ–I:ಅಂ:2007, ದಿ: 17.4.07.

**ಪ್ರಸ್ತಾವನೆ:**

ಮೇಲೆ ಓದಲಾದ (1) ರ ಸರ್ಕಾರದ ಆದೇಶದಲ್ಲಿ, ಚಾಮರಾಜನಗರ ಜಿಲ್ಲೆ, ಚಾಮರಾಜನಗರ–ರಾಮಸಮುದ್ರ ಸ್ಥಳೀಯ ಯೋಜನಾ ಪ್ರದೇಶದ ಮಹಾ ಯೋಜನೆ (ಪರಿಷ್ಕೃತ–1) ಗೆ ತಾತ್ಕಾಲಿಕ ಅನುಮೋದನೆಯನ್ನು ನೀಡಿ ಆದೇಶಿಸಿದೆ.

ಮೇಲೆ (2) ರ ಪತ್ರದಲ್ಲಿ ಚಾಮರಾಜನಗರ–ರಾಮಸಮುದ್ರ ನಗರಾಭಿವೃದ್ಧಿ ಪ್ರಾಧಿಕಾರವು ಚಾಮರಾಜನಗರ ಜಿಲ್ಲೆ, ಚಾಮರಾಜನಗರ–ರಾಮಸಮುದ್ರ ಸ್ಥಳೀಯ ಯೋಜನಾ ಪ್ರದೇಶಕ್ಕೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ರ ಕಲಂ 13(3) ಮತ್ತು 13(ಡಿ) ರನ್ವಯ ಅಗತ್ಯ ಕ್ರಮ ಜರುಗಿಸಿ, ಮಹಾ ಯೋಜನೆ (ಪರಿಷ್ಕೃತ–1) ನಕ್ಷೆಗಳನ್ನು ಹಾಗೂ ವರದಿಯನ್ನು ತಯಾರಿಸಿ, ಸರ್ಕಾರದ ಅಂತಿಮ ಅನುಮೋದನೆಗೆ ನಿರ್ದೇಶಕರು, ನಗರ ಯೋಜನಾ ಇಲಾಖೆ ಇವರ ಮುಖಾಂತರ ಸಲ್ಲಿಸಿರುತ್ತದೆ.

ಮೇಲೆ ಓದಲಾದ (3) ರ ಏಕ ಕಡತದಲ್ಲಿ ನಗರ ಯೋಜನಾ ನಿರ್ದೇಶಕರು, ಚಾಮರಾಜನಗರ–ರಾಮಸಮುದ್ರ ಸ್ಥಳೀಯ ಯೋಜನಾ ಪ್ರದೇಶದ ಜನಸಂಖ್ಯೆಯು 2001 ರ ಜನಗಣತಿಯಂತೆ ಜನಸಂಖ್ಯೆಯು 60,558 ಇದ್ದು, 20 ವರ್ಷಗಳ ಯೋಜನಾ ಅವಧಿ.! ಅಂದರೆ, 2021 ರ ವೇಳೆಗೆ ಜನಸಂಖ್ಯೆಯು 1.25 ಲಕ್ಷ ಆಗಬಹುದೆಂದು ಅಂದಾಜಿಸಿ ಮಹಾ ಯೋಜನೆಯನ್ನು ತಯಾರಿಸಲಾಗಿದೆ. ಚಾಮರಾಜನಗರ–ರಾಮಸಮುದ್ರ ಸ್ಥಳೀಯ ಯೋಜನಾ ಪ್ರದೇಶದ ಜನಸಂಖ್ಯೆಯ ಸ್ಥಳೀಯ ಯೋಜನಾ ಪ್ರದೇಶದ ಸಾಮಾಜಿಕ ಮತ್ತು ಆರ್ಥಿಕ ಸ್ಥಿತಿಗತಿ, ಹವಾಗುಣ, ರಸ್ತೆಗಳ ಹಾಲಿ ಪರಿಚಲನಾ ವ್ಯವಸ್ಥೆಯ ಸಮಸ್ಯೆಗಳನ್ನು ವಿಶ್ಲೇಷಿಸಿ, ಯೋಜನಾ ತತ್ವಗಳ ಆಧಾರದ ಮೇಲೆ ಹಾಗೂ ಮಹಾ ಯೋಜನೆಯ ತಯಾರಿಕೆಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ರ ಕಲಂ 12 ರಲ್ಲಿ ನಿಗಧಿಪಡಿಸಿರುವ ಅಂಶಗಳನ್ನು ಪಟ್ಟಣದ ಮುಂದಿನ ಬೆಳವಣಿಗೆಗೆ ವಿವಿಧ ಉಪಯೋಗಗಳಿಗೆ ಬೇಕಾಗಬಹುದಾದ ಭೂಮಿಯನ್ನು ಈ ಕೆಳಗಿನಂತೆ ಕಾಯ್ದಿರಿಸಿ, ಮಹಾ ಯೋಜನೆಯನ್ನು ರೂಪಿಸಲಾಗಿದೆ ಹಾಗೂ ಮಹಾ ಯೋಜನೆಯನ್ನು ಅನುಷ್ಠಾನಕ್ಕೆ ತರಲು ಅಗತ್ಯವಿರುವ ವಲಯ ನಿಯಮಾವಳಿಯನ್ನು ರಚಿಸಲಾಗಿದೆ.

143
18/6/07

ಚಾಮರಾಜನಗರ-ರಾಮಸಮುದ್ರ ಸ್ಥಳೀಯ ಯೋಜನಾ ಪ್ರದೇಶದ ಒಟ್ಟು 12,099 ಹೆಕ್ಟೇರ್ ವಿಸ್ತೀರ್ಣದಲ್ಲಿ ನಗರದ ಯೋಜಿತ ಬೆಳವಣಿಗೆಗಾಗಿ ಒಟ್ಟು 1518.70 ಹೆಕ್ಟೇರ್ ಪ್ರದೇಶವನ್ನು ನಗರೀಕರಣ ಎಲ್ಲೆಯೆಂದು ಪ್ರಸ್ತಾಪಿಸಲಾಗಿದೆ. ಈ ಪೈಕಿ ವಸತಿಗಾಗಿ ಶೇ.55.46, ವಾಣಿಜ್ಯಕ್ಕೆ ಶೇ.4.92, ಕೈಗಾರಿಕೆಗಾಗಿ ಶೇ.4.61, ಸಾರ್ವಜನಿಕ: ಅರೆ ಸಾರ್ವಜನಿಕಕ್ಕೆ ಶೇ.6.40, ಉದ್ಯಾನವನ ಮತ್ತು ಬಯಲು ಜಾಗೆಗೆ ಶೇ.6.51, ಸಾರಿಗೆ ಮತ್ತು ಸಂಪರ್ಕಕ್ಕೆ ಶೇ.21.79 ಮತ್ತು ನಾಗರೀಕ ಸೌಲಭ್ಯಕ್ಕೆ ಶೇ.0.31 ವಿಸ್ತೀರ್ಣವನ್ನು ನಿಗಧಿಪಡಿಸಲಾಗಿದೆ.

ಸದರಿ ಮಹಾ ಯೋಜನೆ (ಪರಿಷ್ಕೃತ-I) ಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆಯ ಕಲಂ 13(3) ರನ್ವಯ ಅಂತಿಮ ಅನುಮೋದನೆ ನೀಡಲು ಶಿಫಾರಸ್ಸು ಮಾಡಿ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಲಾಗಿದೆ. ಪ್ರಸ್ತಾವನೆಯನ್ನು ಪರಿಶೀಲಿಸಿ ಈ ಕೆಳಕಂಡ ಆದೇಶ ಹೊರಡಿಸಲಾಗಿದೆ.

**<u>ಸರ್ಕಾರದ ಆದೇಶ ಸಂಖ್ಯೆ. ನಅಇ 164 ಮೈಅಪ್ರಾ 2007, ಬೆಂಗಳೂರು, ದಿನಾಂಕ: 7.6.2007.</u>**

ಮೇಲಿನ ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಚಾಮರಾಜನಗರ ಜಿಲ್ಲೆ, ಚಾಮರಾಜನಗರ-ರಾಮಸಮುದ್ರ ಸ್ಥಳೀಯ ಯೋಜನಾ ಪ್ರದೇಶಕ್ಕೆ ರೂಪಿಸಿರುವ ಮಹಾ ಯೋಜನೆ (ಪರಿಷ್ಕೃತ-I) ಗೆ, ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ರ ಕಲಂ 13(3) ರನ್ವಯ ಅಂತಿಮ ಅನುಮೋದನೆಯನ್ನು ನೀಡಲಾಗಿದೆ.

ಮಹಾ ಯೋಜನೆಗೆ ಅಂತಿಮ ಅನುಮೋದನೆ ನೀಡಿದ ಗುರುತಾಗಿ ವರದಿ ಹಾಗೂ ನಕ್ಷೆಗಳ ಮೇಲೆ ಸರ್ಕಾರದ ಮುದ್ರೆಯನ್ನು ಹಾಕಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಬಿ.ಜಿ.ವಾಲಿ)
ಸರ್ಕಾರದ ಅಧೀನ ಕಾರ್ಯದರ್ಶಿ,
ನಗರಾಭಿವೃದ್ಧಿ ಇಲಾಖೆ.

ಇವರಿಗೆ:

೧. ನಿರ್ದೇಶಕರು, ನಗರ ಯೋಜನಾ ಇಲಾಖೆ, ಬೆಂಗಳೂರು.
೨. ಆಯುಕ್ತರು, ನಗರಾಭಿವೃದ್ಧಿ ಪ್ರಾಧಿಕಾರ, ಚಾಮರಾಜನಗರ-ರಾಮಸಮುದ್ರ.
೩. ನಗರ ಯೋಜನಾ ಸಹಾಯಕ ನಿರ್ದೇಶಕರು, ನಗರ ಯೋಜನಾ ಇಲಾಖೆ, ಚಾಮರಾಜನಗರ.
೪. ಮಾನ್ಯ ಮುಖ್ಯಮಂತ್ರಿಯವರ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಧಾನಸೌಧ.
೫. ವಾರದ ಕರ್ನಾಟಕ ರಾಜ್ಯಪತ್ರ.
೬. ಸರ್ಕಾರದ ಕಾರ್ಯದರ್ಶಿಗಳ/ಜಂಟಿ ಕಾರ್ಯದರ್ಶಿಗಳ ಆಪ್ತ ಸಹಾಯಕರು, ನಗರಾಭಿವೃದ್ಧಿ ಇಲಾಖೆ.
೭. ಶಾಖಾ ರಕ್ಷಾ ಕಡತ: ಹೆಚ್ಚುವರಿ ಪ್ರತಿಗಳು.